# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1113
2. ಸದಸ್ಯರ ಹೆಸರು : ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 20.12.2018
4. ಉತ್ತರಿಸಬೇಕಾದವರು : ಮಾನ್ಯ ಮುಖ್ಯಮಂತ್ರಿಯವರು

| ಪ್ರಶ್ನೆ | ಉತ್ತರ |
|---|---|
| ಅ) ಸರ್ಕಾರಿ ನೌಕರರ ನೇಮಕಾತಿ ಮತ್ತು ನಿಯಮಾವಳಿಗಳು ಎಷ್ಟು ವರ್ಷಗಳಿಗೊಮ್ಮೆ ಪರಿಷ್ಕರಣೆಯಾಗಬೇಕಾಗಿದೆ; ನಿಯಮಾವಳಿಯನುಸಾರ ಪರಿಷ್ಕರಣೆಯಾಗದ ಇಲಾಖೆಗಳಾವುವು; ಕಾಲಕಾಲಕ್ಕೆ ಪರಿಷ್ಕರಣೆ ಮಾಡಲು ಏನು ಕ್ರಮವಹಿಸಲಾಗಿದೆ; | 1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 97 ಸೇನಿಡಿ 2004, ದಿನಾಂಕ:08.10.2004ರಲ್ಲಿ ಸರ್ಕಾರದ ಎಲ್ಲಾ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ/ಪರಿಷ್ಕರಣೆ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ಅದರಲ್ಲಿ ಕನಿಷ್ಠ 3 ವರ್ಷಗಳಿಗೊಮ್ಮೆ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಬೇಕೆಂದು ತಿಳಿಸಲಾಗಿದೆ.<br>2) ಸದರಿ ಆದೇಶದನ್ವಯ ಬಹುತೇಕ ಇಲಾಖೆಗಳು ಕಾಲಕಾಲಕ್ಕೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸದೇ ಇರುವುದನ್ನು ಗಮನಿಸಿದ ಸಿ.ಆ.ಸು.ಇಲಾಖೆಯು, ಎಲ್ಲಾ ಇಲಾಖೆಗಳು ತಮ್ಮ ತಮ್ಮ ಕ್ಷೇತ್ರ ಇಲಾಖೆ ಹಾಗೂ ಸಂಬಂಧಿತ ನಿಗಮ ಮಂಡಳಿಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವಂತೆ ದಿನಾಂಕ:09.06.2017 ಹಾಗೂ 15.12.2017ರಂದು ಸುತ್ತೋಲೆಗಳನ್ನು ಹೊರಡಿಸಿ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿರುತ್ತದೆ.<br>3) ಅದರಂತೆ ಎಲ್ಲಾ ಇಲಾಖೆಗಳು ತಮ್ಮ ಕ್ಷೇತ್ರ ಇಲಾಖೆ ಹಾಗೂ ನಿಗಮ ಮಂಡಳಿಗಳಿಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸಲು ಕ್ರಮ ವಹಿಸುತ್ತಿವೆ. |

ಸಂಖ್ಯೆ: ಸಿಆಸುಇ 156 ಸೇನಿಡಿ 2018

(ಹೆಚ್.ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ